# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42

ಸಂಖ್ಯೆ:ಸ.ಇಂ/ವಾ-92/ವಾರ್ಡ್‌ಸಭೆ/ /2022-23 ದಿನಾಂಕ:04-07-2022

## ವಾರ್ಡ್-92 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 04-07-2022 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-92-ಶಿವಾಜಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ಜೆ.ಪ್ರಕಾಶ್. ಉಪ ನಿಯಂತ್ರಕರು (ಹಣಕಾಸು-ಬೊಮ್ಮನಹಳ್ಳಿ) ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ.ಜೆ.ಪ್ರಕಾಶ್ | ಉಪ ನಿಯಂತ್ರಕರು (ಹಣಕಾಸು-ಬೊಮ್ಮನಹಳ್ಳಿ) ನೋಡಲ್ ಅಧಿಕಾರಿ |
| 2 | ಶ್ರೀ ಹೆಚ್.ಎಂ ರಂಗನಾಥ್. | ಸ ಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:92 |
| 3 | ಶ್ರೀಮತಿ ಜ್ಯೋತಿಲಕ್ಷ್ಮೀ | ಸ.ಕ.ಅ(ಶಿವಾಜಿನಗರ) |
| 4 | ಶ್ರೀ ಜಾವೀದ್ | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ(ಪ್ರಭಾರ) |
| 5 | ಶ್ರೀ.ವಿ.ವೆಂಕಟೇಶ್. | ಹಿರಿಯ ಆರೋಗ್ಯ ಪರಿವೀಕ್ಷಕರು |

**ಮಾನ್ಯ ನೋಡಲ್ ಅಧಿಕಾರಿರವರು ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.**

**ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:92ರ ಘನತ್ಯಾಜ್ಯ ವಿಲೇವಾರಿ ಸಿಬ್ಬಂದಿವರ್ಗದವರಿಗೆ ಅವರುಗಳ ಕರ್ತವ್ಯ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ತಿಳುವಳಿಕೆ ಮೂಡಿಸಿ 3ನೇ ಬೂಸ್ಟರ್ ಡೋಸ್ ಲಸಿಕೆಯನ್ನು ಪಡೆಯಲು ಸೂಚಿಸಲಾಯಿತು. ಹಾಗೂ ಘನತ್ಯಾಜ್ಯ ವಿಲೇವಾರಿಯ ಎಲ್ಲಾ ಸಿಬ್ಬಂದಿವರ್ಗದವರಿಗೂ ಕಸ/ತ್ಯಾಜ್ಯ ವಸ್ತುಗಳ ಬೇರ್ಪಡಿಸುವಿಕೆ ಮತ್ತು ಸಮರ್ಪಕ ವಿಲೇವಾರಿ ಬಗ್ಗೆ ಅನುಷ್ಠಾನಗೊಳಿಸಲು ನಿರ್ದೇಶನ ನೀಡಲಾಯಿತು.

- ಬೆಂಗಳೂರು ಮೆಟ್ರೋ ರೈಲು ಕಾರ್ಪೋರೇಷನ್ ಲಿ.ಟೆ ರವರು ಸಿಲ್ಟ್ ಅನ್ನು ಡ್ರೈನ್‌ಗೆ ಬಿಡುವುದರಿಂದ ಪೂರ್ತಿ ಚರಂಡಿಯಲ್ಲಿ ಹೂಳು ತುಂಬಿ ಹೋಗಿರುತ್ತದೆ ಅದನ್ನು ಸರಿಯಾದ ರೀತಿ ನಿರ್ವಹಿಸಲು ಸಂಬಂಧಿಸಿದವರಿಗೆ ಸೂಚಿಸಲು ತಿಳಿಸಿರುತ್ತಾರೆ.

**(ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ (ಶಿವಾಜಿನಗರ)**

- ಗಾರ್ಬೇಜ್ ಗುತ್ತಿಗೆದಾರರು ಕಸವಿಲೇವಾರಿ ಸಮರ್ಪಕವಾಗಿ ನಿರ್ವಹಿಸದೆ ಇರುವ ಕಾರಣ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು, ಕಸ ವಿಲೇವಾರಿ ಸರಿಯಾದ ಸಮಯಕ್ಕೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ನಿರ್ವಹಣೆ ರವರಿಗೆ ತಿಳಸಲು ಸೂಚಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ಶಿವಾಜಿನಗರ)**

- ಹಲವಾರು ಕೆಲಸಗಳು ಪ್ರಗತಿಯಲ್ಲಿದ್ದು ಶೀಘ್ರವಾಗಿ ಮುಗಿಸಲು ಸಾರ್ವಜನಿಕರು ಕೋರಿರುತ್ತಾರೆ.
- ಮಳೆಯಿಂದಾಗಿ ಹಾನಿಯಾಗಿರುವ ಕುಟುಂಬಗಳಿಗೆ ಸರ್ಕಾರವು ಸೂಚಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಸೂಕ್ತ ಕ್ರಮವಹಿಸಲು ತಿಳಿಸಿರುತ್ತಾರೆ.
- ದಿನಾಂಕ:10-07-2022 ರಂದು ಬಕ್ರೀದ್ ಹಬ್ಬ ಇರುವುದರಿಂದ ಪೂರ್ಣ ರೀತಿಯಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು. ಮತ್ತು ಸಾರ್ವಜನಿಕರಿಗೆ Animal Waste Bag ನೀಡಲು ಘನತ್ಯಾಜ್ಯ ರವರಿಗೆ ತಿಳಿಸಿರುತ್ತಾರೆ.
- ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಮತ್ತು ಪಾದಚಾರಿ ರಸ್ತೆಗಳಲ್ಲಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸ್‌ನ್ನು ರಾತ್ರಿ ಹೊತ್ತಿನಲ್ಲಿ ಸುರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹಾಗೂ ಪಾದಚಾರಿಗಳಿಗೆ ಓಡಾಡಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ, ಆದುದರಿಂದ ಸದರಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸನ್ನು ತೆರವುಗೊಳಿಸಲು ಅವಶ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ಮಾತನಾಡುತ್ತಾ, ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.
- ವಾರ್ಡಿನಲ್ಲಿ ತಳ್ಳುವ ಗಾಡಿಗಳ ಕೊರತೆ ಇದ್ದು, ಸರಿಯಾಗಿ ಕಸ ವಿಲೇವಾರಿಯಾಗುತಿಲ್ಲದಿರುವುದು ಕಂಡು ಬಂದಿದ್ದು ಇದರ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ದೂರು ಬಂದಿರುತ್ತದೆ ಹಾಗೂ ಪೌರಕಾರ್ಮಿಕರನ್ನು ವಿಚಾರಿಸಿದ್ದಲ್ಲಿ ಅವರಿಗೆ ತಳ್ಳುವ ಗಾಡಿ (Push Cart) ಕೊರತೆ ಇರುವುದು ಕಂಡುಬಂದಿರುತ್ತದೆ. ಆದ್ದುದರಿಂದ ಆದಷ್ಟು ಬೇಗ ಇವರಿಗೆ ತಳ್ಳುವ ಗಾಡಿ (Push Cart) ನೀಡಲು ಸೂಚಿಸಿದೆ.
- ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು ಹಾಗು ಹಾಜರಿದ್ದ ಸಾರ್ವಜನಿಕರಿಗೆ ಕಸ ವಿಲೇವಾರಿ ಬಗ್ಗೆ ಆದಷ್ಟು ಗಮನವಹಿಸಿ ಸಹಕರಿಸಿದಲ್ಲಿ ದಿನನಿತ್ಯದ ಕಸ ವಿಲೇವಾರಿ ಸಮಯದಲ್ಲಿ ಸಮರ್ಪಕವಾಗಿ ನಿರ್ವಹಿಸಲು ಗುತ್ತಿಗೆದಾರರು ಸಹಾಯವಾಗುತ್ತದೆ.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

(ಹೆಚ್.ಎಂ.ರಂಗನಾಥ)
ಸ.ಅ & ಕಾರ್ಯದರ್ಶಿ
ವಾರ್ಡ್-92, ಶಿವಾಜಿನಗರ